**ಕರ್ನಾಟಕ ಸರ್ಕಾರ**

ಸಂ.ಗ್ರಾಅಪ/17/ಗ್ರಾಪಂಅ/2015

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 24-02-2016

ಇವರಿಂದ:

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್),
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ಇವರಿಗೆ:

ಎಲ್ಲಾ ಜಿಲ್ಲಾ ಪಂಚಾಯತಿಯ
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,

ಮಾನ್ಯರೆ,

ವಿಷಯ: ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ನಿರ್ಮಿಸುವ ಸಣ್ಣ ಕೈಗಾರಿಕಾ ಕಟ್ಟಡಗಳಿಗೆ ಟ್ರೇಡ್ ಲೈಸೆನ್ಸ್ ಮತ್ತು ನವೀಕರಣ ಲೈಸೆನ್ಸ್ ಫೀಜುಗಳನ್ನು ವಸೂಲಿ ಮಾಡುತ್ತಿರುವ ಬಗ್ಗೆ

ಉಲ್ಲೇಖ: ಸರ್ಕಾರದ ಇದೇ ಸಮಸಂಖ್ಯೆಯ ಪತ್ರ ದಿನಾಂಕ:03-02-2016.

---

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಸರ್ಕಾರದ ಪತ್ರದಲ್ಲಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಸ್ಥಾಪಿಸುವ ಕೈಗಾರಿಕೆಗಳಿಗೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 66 ರಡಿ ಕೈಗಾರಿಕೆಗಳನ್ನು ಸ್ಥಾಪಿಸಲು ಗ್ರಾಮ ಪಂಚಾಯತಿಗಳಿಂದ "ಅನುಮತಿ" ಮಾತ್ರ ಅಗತ್ಯವಿದೆ. ಆದರೆ ಟ್ರೇಡ್ ಲೈಸೆನ್ಸ್ ನೀಡಲು ಗ್ರಾಮ ಪಂಚಾಯತಿಗಳಿಗೆ ಯಾವುದೇ ಅಧಿಕಾರವಿರುವುದಿಲ್ಲವೆಂದು ತಿಳಿಸಲಾಗಿದೆ.

ಗ್ರಾಮ ಪಂಚಾಯತಿಗಳು ಅವುಗಳ ವ್ಯಾಪ್ತಿಯ ಸಣ್ಣ ಕೈಗಾರಿಕೆಗಳ ಮಾಲೀಕರಿಂದ ಲೈಸೆನ್ಸ್ ಹಾಗೂ ಲೈಸೆನ್ಸ್ ನವೀಕರಣ ಬಾಬ್ತಿಗಾಗಿ ಸಣ್ಣ ಕೈಗಾರಿಕೆಗಳ ಮೇಲೆ ನಿಯಮಬಾಹಿರವಾಗಿ ಗರಿಷ್ಠ ಮೊತ್ತವನ್ನು ನಿಗದಿಗೊಳಿಸಿರುವ ಬಗ್ಗೆ ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ರವರು ಸರ್ಕಾರದ ಗಮನಕ್ಕೆ ತಂದಿರುತ್ತಾರೆ.

ಆದುದರಿಂದ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 66 ರಡಿ ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಲು ಗ್ರಾಮ ಪಂಚಾಯತಿಗಳಿಂದ ಅನುಮತಿಯನ್ನು ಮಾತ್ರ ನೀಡಬೇಕಾಗಿರುತ್ತದೆ. ಪ್ರಸ್ತುತ ಗ್ರಾಮ ಪಂಚಾಯತಿಗಳು ಟ್ರೇಡ್ ಲೈಸೆನ್ಸ್ ಮತ್ತು ನವೀಕರಣ ಲೈಸೆನ್ಸ್ ಫೀಜುಗಳನ್ನು ವಸೂಲಿ ಮಾಡದಿರುವಂತೆ ತಮಗೆ ತಿಳಿಸಲು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

(ಟಿ.ವಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

<u>ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.</u>

1. ಎಲ್ಲಾ ತಾಲ್ಲೂಕು ಪಂಚಾಯತಿಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.
2. ಎಲ್ಲಾ ಗ್ರಾಮ ಪಂಚಾಯತಿಗಳ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ
3. ಉಪಾಧ್ಯಕ್ಷರು, ಕರ್ನಾಟಕ ಸಣ್ಣ ಕೈಗಾರಿಕೆಗಳ ಸಂಘ ನಂ.2/106, 17ನೇ ಕ್ರಾಸ್, ಮಾಗಡಿ ಕಾರ್ಡ್ ರೋಡ್, ವಿಜಯನಗರ, ಬೆಂಗಳೂರು-40.